<u>ದಿವಾಣಿ ನ್ಯಾಯಾಧೀಶರು ಮತ್ತು ಜೆಎಂಎಫ್‌ಸಿ ನ್ಯಾಯಾಲಯ, ಮುಂಡರಗಿ</u>

| | |
|---|---|
| ಓ. ಎಸ್. ನಂ. | 35/2020 |
| ಪಿ. ಡಬ್ಲ್ಯೂಃ | 1 |
| ದಿನಾಂಕಃ | 22.11.2023 |

ಸಾಕ್ಷಿಗೆ ಪ್ರಮಾಣ ವಚನ ಭೋದಿಸಲಾಯಿತು.

**ಪಾಟೀ ಸವಾಲುಃ ಮಾನ್ಯ ಎಪಿಪಿ ರವರಿಂದಃ**

1. ಪ್ರತಿವಾದಿ ನಂ. 4 ಮತ್ತು 5 ರವರಿಗೆ ಈ ದಾವೆಯಲ್ಲಿ ಯಾವುದೇ ಹಿತಾಸಕ್ತಿ ಇರುವುದಿಲ್ಲ ಎಂದರೆ ಸರಿ. ಪ್ರತಿವಾದಿ ನಂ. 4 ಮತ್ತು 5 ರವರು ತಮ್ಮ ಕರ್ತವ್ಯವಾದ ಕಂದಾಯ ದಾಖಲೆಗಳನ್ನು ಪರಿಶೀಲಿಸುವುದು ಮತ್ತು ತಮ್ಮ ಅಧಿಕಾರ ವ್ಯಾಪ್ತಿಯ ಇನ್ನಿತರ ಕೆಲಸಗಳನ್ನು ಮಾಡುತ್ತಾರೆ ಎಂದರೆ ಸರಿ. ನನ್ನ ದಾವೆಯ ಪ್ರಾರ್ಥನೆಯಲ್ಲಿ 4 ನೇ ಪ್ರಾರ್ಥನೆಯಂತೆ ನಾನು ಸಂಬಂಧಪಟ್ಟ ಜಿಲ್ಲಾಧಿಕಾರಿ ಮತ್ತು ಉಪ ಜಿಲ್ಲಾಧಿಕಾರಿಗಳ ಸಂಪರ್ಕ ಮಾಡಿ ಅರ್ಜಿ ಸಲ್ಲಿಸಿರಲಿಲ್ಲ ಎಂದರೆ ಸಾಕ್ಷಿಯು ತಹಶೀಲ್ದಾರರು ಮತ್ತು ಉಪ ತಹಶೀಲ್ದಾರರು ಮುಂಡರಗಿ ಇವರು ದಾವಾ ಆಸ್ತಿಗೆ ಸಂಬಂಧಿಸಿದಂತೆ ಕೆಲವು ಕಂದಾಯ ದಾಖಲೆಗಳನ್ನು ಕಾನೂನು ಬಾಹಿರವಾಗಿ ಸೃಷ್ಟಿಸಿರುತ್ತಾರೆ ಅಂತಾ ನುಡಿಯುತ್ತಾರೆ. ಈ ಕುರಿತು ನಾನು ಸುಳ್ಳು ನುಡಿಯುತ್ತಿದ್ದೇನೆ ಎಂದರೆ ಸರಿ ಅಲ್ಲ. ಕಂದಾಯ ದಾಖಲೆಗಳಲ್ಲಿ ತಿದ್ದುಪಡಿ ಮಾಡುವ ಕುರಿತು ಆದೇಶ ಮಾಡಲು ಈ ನ್ಯಾಯಾಲಯಕ್ಕೆ ಅಧಿಕಾರ ವ್ಯಾಪ್ತಿ ಇಲ್ಲ ಎಂದರೆ ಸರಿ ಅಲ್ಲ. ನನ್ನ ಮುಖ್ಯ ವಿಚಾರಣೆಯಲ್ಲಿ ಬರೆದ ಎಲ್ಲ ಸಂಗತಿಗಳು ಸುಳ್ಳು ಎಂದರೆ ಸರಿ ಅಲ್ಲ.

ಮರು ವಿಚಾರಣೆ ಇರುವುದಿಲ್ಲ.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದಂತೆ ಬೆರಳಚ್ಚು ಮಾಡಲಾಯಿತು)

ಓ ಹೇ ಕೆ ಸರಿ ಇದೆ.

ದಿವಾಣಿ ನ್ಯಾಯಾಧೀಶರು ಹಾಗೂ ಜೆಎಂಎಫ್‌ಸಿ
ಮುಂಡರಗಿ.